ದಿನಾಂಕ:-04-02-2023 (ಶನಿವಾರ) ರಂದು ವಾರ್ಡ್ ಸಂಖ್ಯೆ : 161 (ಹಳೆ ಸಂಖ್ಯೆ : 132) ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆ ನಡವಳಿಗಳು

*********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ : 161 (ಹಳೆ ಸಂಖ್ಯೆ : 132) ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆಯು ದಿನಾಂಕ:-04-02-2023 ಸೋಮವಾರ 10.30 ಗಂಟೆಗೆ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗದ ಕಛೇರಿಯಲ್ಲಿ ನಡೆದಿರುತ್ತದೆ.

**ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ**

| ಕ್ರ.ಸಂ | ಅಧಿಕಾರಿಗಳು ಮತ್ತು ಸದಸ್ಯರ ಹೆಸರು | ಪದನಾಮ | ಇಲಾಖೆ | ಹಾಜರಾತಿ |
|---|---|---|---|---|
| 1 | ಶ್ರೀ. ರಾಧಕೃಷ್ಣ | ನೋಡಲ್ ಅಧಿಕಾರಿ | ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ವಿಭಾಗ | ಹಾಜರಾಗಿರುತ್ತಾರೆ |
| 2 | ಶ್ರೀ.ಶಿವಕುಮಾರ್ | ಸದಸ್ಯರು | ಸ್ಟ್ರೀಟ್‌ಲೈಟ್ | ಹಾಜರಾಗಿರುತ್ತಾರೆ |
| 3 | ಶ್ರೀ. ಮಾರುತಿ ಸೇಟ್ | ಸದಸ್ಯರು | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ | ಹಾಜರಾಗಿರುತ್ತಾರೆ |
| 4 | ಶ್ರೀ.ಸ್ವಾಮಿಗೌಡ | ಸದಸ್ಯರು | ತೋಟಗಾರಿಕೆ ಇಲಾಖೆ | ಹಾಜರಾಗಿರುತ್ತಾರೆ |
| 5 | ಕು|| ಅನನ್ಯ.ಬಿ.ಕೆ. | ಸದಸ್ಯರು | ಸ.ಅ.(ಗುತ್ತಿಗೆ ಆದರದ ಮೇಲೆ) | ಹಾಜರಾಗಿರುತ್ತಾರೆ |
| 6 | ಶ್ರೀ.ಸಂದೀಪ್ ಕುಮಾರ್ | ಸದಸ್ಯರು | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಾಗಿರುತ್ತಾರೆ |
| 7 | ಶ್ರೀ.ಮಣಿಕಂಠನ್ | ಸದಸ್ಯರು | ಪಶು ಸಂಗೋಪನೆ ಇಲಾಖೆ | ಹಾಜರಾಗಿರುತ್ತಾರೆ |
| 8 | ಶ್ರೀ.ಸಿ.ನಾರಾಯಣ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 9 | ಶ್ರೀಮತಿ.ಹೆಚ್.ಆರ್.ಶಿವಮ್ಮ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 10 | ಶ್ರೀ.ಚೇತನ್.ಪಿ. | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |

ವಾರ್ಡ್ ಕಮಿಟಿ ಸಭೆಯನ್ನು ನಡೆಸುವ ಕುರಿತಾಗಿ ದಿನಾಂಕ:-04-02-2023 ರ ಸಭೆಯ ಸೂಚನಾ ಪತ್ರವನ್ನು ವಾರ್ಡ್ ಸಂಖ್ಯೆ : 161 ಕ್ಕೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಕಳುಹಿಸಿಕೊಡಲಾಗಿರುತ್ತದೆ ಹಾಗೂ ವಾರ್ಡ್ ಸಂಖ್ಯೆ : 161 ವಾಟ್ಸ್ ಆಫ್ ಗ್ರೂಪ್‌ಗೆ ಸದರಿ ಸಭೆಯ ಸೂಚನಾ ಪತ್ರವನ್ನು ಹಾಕಲಾಗಿರುತ್ತದೆ.

ಸಭೆಯ ಪ್ರಾರಂಭಿಕ ಹಂತದಲ್ಲಿ ವಾರ್ಡ್ ಕಾರ್ಯದರ್ಶಿ ರವರು ಸಭೆಗೆ ಹಾಜರಿದ್ದ ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಸ್ವಾಗತಿಸಿದರು.

Scanned with OKEN Scanner

**ಸಭೆಯಲ್ಲಿ ಸಾರ್ವಜನಿಕ ದೂರುಗಳಿಗೆ ಸಂಬಂಧಿಸಿದಂತೆ ಚರ್ಚಿಸಲಾಯಿತು.**

1. **ಘನ ತ್ಯಾಜ್ಯ ಇಲಾಖೆ** : ಚಂದ್ರಾಲೇಔಟ್, ಬಿ.ಸಿ.ಸಿ. ಬಡಾವಣೆಯ, ರೈಲ್ವೆ ಪ್ಯಾರಲಲ್ ಪಾದಚಾರಿ ಮಾರ್ಗದಲ್ಲಿ ರಸ್ತೆಯ ಮೇಲೆ ಪ್ರಾಣಿಗಳನ್ನು ಕೊಂದು ಅದರ ಗಲೀಜುಗಳನ್ನು ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ತೊಂದರೆಯಾಗುತ್ತಿದೆ ಎಂದು ಸ್ಥಳೀಯ ನಿವಾಸಿಗಳು ಕೋರಿದರು. ಈ ಕುರಿತು ಅಗತ್ಯ ಕ್ರಮವಹಿಸುವುದಾಗಿ ನೋಡೆಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

   **ಕ್ರಮ** : ಘನ ತ್ಯಾಜ್ಯ ಇಲಾಖೆ

2. **ಪಶು ಸಂಗೋಪನೆ ಇಲಾಖೆ** : ಚಂದ್ರಾಲೇಔಟ್, ಬಿ.ಸಿ.ಸಿ. ಬಡಾವಣೆಯ, ರೈಲ್ವೆ ಪ್ಯಾರಲಲ್ ಪಾದಚಾರಿ ಮಾರ್ಗದಲ್ಲಿ ರಸ್ತೆಯ ಮೇಲೆ ಪ್ರಾಣಿಗಳನ್ನು ಕೊಂದು ಅದರ ಗಲೀಜುಗಳನ್ನು ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ತೊಂದರೆಯಾಗುತ್ತಿದೆ ಎಂದು ಸ್ಥಳೀಯ ನಿವಾಸಿಗಳು ಕೋರಿದರು. ಈ ಕುರಿತು ಅಗತ್ಯ ಕ್ರಮವಹಿಸುವುದಾಗಿ ನೋಡೆಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

   **ಕ್ರಮ** : ಪಶು ಸಂಗೋಪನೆ ಇಲಾಖೆ

ಸಭೆಗೆ ಗೈರು ಹಾಜರಾಗಿರದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತೀವ್ರ ಅಸಮದಾನ ವ್ಯಕ್ತಪಡಿಸಿದ್ದು, ಮುಂದಿನ ಸಭೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ತಪ್ಪದೆ ಹಾಜರಾಗುವಂತೆ ಸಭೆಯು ತೀರ್ಮಾನಿಸಿರುತ್ತದೆ. ಗೈರು ಅಧಿಕಾರಿಗಳಿಗೆ ಸಂಬಂಧಿಸಿದಂತೆ ಅವರ ಇಲಾಖೆಗಳ ಮೇಲಾಧಿಕಾರಿಗಳಿಗೆ ವರದಿ ಮಾಡಲಾಗುವುದೆಂದು ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಹಾಲಿಸಿ ಸ್ಪಂದಿಸಿ ಪರಿಹರಿಸಲು ಕ್ರಮತೆಗೆದುಕೊಂಡು ಸಂಬಂಧಪಟ್ಟ ಇಲಾಖೆಗಳು ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿರವರ ಆದೇಶದ ಮೇರೆಗೆ**

ಕಾರ್ಯದರ್ಶಿ

**ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ**

**(ಹಳೆ ಸಂಖ್ಯೆ : 132)**

**ಪ್ರತಿಯನ್ನು:-**

1. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
2. ಮುಖ್ಯ ಅಭಿಯಂತರರು (ದಕ್ಷಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
3. ಕಾರ್ಯಪಾಲಕ ಅಭಿಯಂತರರು, ವಿಜಯನಗರ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
5. ಕಛೇರಿ ಕಡತಕ್ಕಾಗಿ.

Scanned with OKEN Scanner